ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ.

**ವಿಷಯ:**

ರಾಜ್ಯದ ಅನುದಾನಿತ ಶಾಲೆಗಳಲ್ಲಿ 2015ನೇ ಸಾಲಿನವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಮಾತ್ರ ಅನುಮತಿ ನೀಡಲಾಗಿದೆ. ತದನಂತರ ನೂರಾರು ಹುದ್ದೆಗಳು ಖಾಲಿಯಾಗಿದ್ದು ಸದರಿ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರುವುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜಿನಾಮೆಯಿಂದ 2019ನೇ ಸಾಲಿನವರಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡಬೇಕು ಹಾಗೂ ಈಗಾಗಲೇ ಹುದ್ದೆ ತುಂಬಿಕೊಳ್ಳಲು ಅನುಮತಿ ನೀಡಿ ಇಲಾಖೆಯ ವಿವಿಧ ಹಂತಗಳಲ್ಲಿರುವ ಕಡತಗಳಿಗೆ ಅನುಮೋದನೆ ನೀಡಬೇಕೆಂಬ ವಿಷಯದ ಬಗ್ಗೆ ಪ್ರಸ್ತಾಪಿಸಲಾಗಿದೆ.

**ಉತ್ತರ:**

ಸರ್ಕಾರದ ಸುತ್ತೋಲೆ ಸಂಖ್ಯೆ : ಇಡಿ ೧೧೨ ಪಿಎಂಸಿ ೯೯, ದಿನಾಂಕ : ೦೧/೦೬/೧೯೯೯ರಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ವಿವಿಧ ಕಾರಣಗಳಿಂದ ಖಾಲಿಯಾಗಿರುವ ಹಾಗೂ ಖಾಲಿಯಾಗುವ ಸಹ ಶಿಕ್ಷಕ ವೃಂದ/ದೈಹಿಕ ಶಿಕ್ಷಣ ಶಿಕ್ಷಕ ವೃಂದದ ಹುದ್ದೆಗಳನ್ನು ಕಾರ್ಯಭಾರವಿಲ್ಲದ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿನ ಹೆಚ್ಚುವರಿ ಸಿಬ್ಬಂದಿಗಳನ್ನು ಅಗತ್ಯವಿರುವ ಹಾಗೂ ಕಾರ್ಯಭಾರವಿರುವ ಶಾಲೆಗಳಿಗೆ ನಿಯಮಾನುಸಾರ ಹಂಚಿಕೆ ಮಾಡುವ ಮೂಲಕ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹುದ್ದೆಗಳು ಹೆಚ್ಚುವರಿ ಇರುವುದರಿಂದ, ಭರ್ತಿ ಮಾಡುವ ಪ್ರಮೇಯ ಉದ್ಭವಿಸುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್‌ಇಪಿ 2017, ದಿನಾಂಕ:25/09/2018ರಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ (ಸಹ ಶಿಕ್ಷಕ ವೃಂದ) ಹಾಗೂ ದೈಹಿಕ ಶಿಕ್ಷಣ ಶಿಕ್ಷಕ (ಗ್ರೇಡ್-1) ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಕೆ ಮಾಡಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರೊಂದಿಗೆ ವಿವಿಧ ಕಾರಣಗಳಿಂದ ಮುಚ್ಚಲ್ಪಟ್ಟ ಅನುದಾನಿತ ಪ್ರೌಢಶಾಲೆಗಳಲ್ಲಿ ಹೆಚ್ಚುವರಿಯಾಗುವ ಹಾಗೂ ಕಾರ್ಯಭಾರವಿಲ್ಲದ ಸಹ ಶಿಕ್ಷಕ ಹಾಗೂ ದೈಹಿಕ ಶಿಕ್ಷಕರನ್ನು ಗುರುತಿಸಿ ಅಗತ್ಯವಿರುವ ಹಾಗೂ ಕಾರ್ಯಭಾರವಿರುವ ಅನುದಾನಿತ ಪ್ರೌಢಶಾಲೆಗಳಿಗೆ ಹಂಚಿಕೆ ಮಾಡಲಾಗುತ್ತಿತ್ತು.

ಪ್ರಸ್ತುತ ಸಾಲಿನಲ್ಲಿ ಕೋವಿಡ್-೧೯ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಇ ೧೫೭ ವೆಚ್ಚ-೮/೨೦೨೦ ದಿನಾಂಕ:೧೦.೦೬.೨೦೨೦ರಲ್ಲಿ ಅನುದಾನಿತ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜಿನಾಮೆ, ಇತರೆ ಯಾವುದೇ ಕಾರಣಗಳಿಂದ ಉಂಟಾಗುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತಿಲ್ಲ ಎಂದು ಆದೇಶಿಸಲಾಗಿದೆ.

ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ದಿನಾಂಕ:೩೧/೧೨/೨೦೧೫ರ ಪೂರ್ವದಲ್ಲಿ ಖಾಲಿಯಾದ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಅವಕಾಶ ಕಲ್ಪಿಸಿರುವುದಕ್ಕೆ ಅನುಕೂಲವಾಗುವಂತೆ ಬಾಕಿ ಉಳಿದ ಪ್ರಸ್ತಾವನೆಗಳಿಗೆ ಆರ್ಥಿಕ ಮಿತವ್ಯಯ ಸಡಿಲಿಕೆ ನೀಡುವ ಬಗ್ಗೆ ಪ್ರಸ್ತಾಪಿಸಿ, ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ದಿನಾಂಕ:15/10/2020ರಂದು ನೀಡಿರುವ ಅಭಿಪ್ರಾಯ ಈ ಕೆಳಕಂಡಂತಿದೆ.

"The administrative department proposal has been examined. As the fiscal position of the state is in such state that creating more commitment on revenue expenditure is not viable, the ban on appointments under grant-in -aid for the primary and secondary education department is necessary in the interest of the fiscal discipline. Hence, the administrative department proposal for relaxation for appointments cannot be considered."

ರಾಜ್ಯದಲ್ಲಿನ ಅನುದಾನಿತ ಖಾಸಗಿ ಪ್ರೌಢಶಾಲೆಗಳಲ್ಲಿ ವಿವಿಧ ಕಾರಣಗಳಿಂದ ದಿನಾಂಕ:01.01.2016ರಿಂದ 31.12.2019ರವರೆಗೆ ಒಟ್ಟು 04 ನಾಲ್ಕು ವರ್ಷಗಳಲ್ಲಿ ಖಾಲಿಯಾಗಿರುವ ಒಟ್ಟು 3562 ಹುದ್ದೆಗಳಿಗೆ ತಗಲಬಹುದಾದ ಅಂದಾಜು ರೂ. 166,42,37,640/- ಗಳ ವೆಚ್ಚದೊಂದಿಗೆ ಹುದ್ದೆಗಳಿಗೆ ತಗಲಬಹುದಾದ ಒಂದು ವರ್ಷದ ಆರ್ಥಿಕ ಅಂದಾಜು ಆಯವ್ಯಯದ ಮಾಹಿತಿಯೊಂದಿಗೆ ಆಯುಕ್ತಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತುತ ಸಾಲಿನಲ್ಲಿ ಶಾಲಾ ಕಾಲೇಜುಗಳು ಕೋವಿಡ್-19 ರಿಂದಾಗಿ ಪ್ರಾರಂಭವಾಗಿಲ್ಲದಿರುವುದರಿಂದ ಹಾಗೂ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕ: 10.06.2020 ರನ್ವಯ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಪ್ರಸ್ತುತದಲ್ಲಿ ಈ ಪ್ರಸ್ತಾವನೆಯನ್ನು ಪರಿಗಣಿಸಿರುವುದಿಲ್ಲ.

ಸಂ: ಇಪಿ೩೭೫ಎಸ್‌ಇಎಸ್ ೨೦೨೦

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು